## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1021 |
| 02. | ಸದಸ್ಯರ ಹೆಸರು | : | ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 03. | ಉತ್ತರಿಸುವ ದಿನಾಂಕ | : | 12.03.2020 |
| 04. | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಪೊಲೀಸ್ ಇಲಾಖೆಯಲ್ಲಿ ಯಾವುದೇ ಹುದ್ದೆಗಳ (ಪಿಎಸ್‌ಐ, ಆರ್‌ಎಸ್‌ಐ, ಪಿಸಿ) ನೇಮಕಾತಿ ಮಾಡಿಕೊಳ್ಳುವಾಗ ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಇಲ್ಲದಿರುವುದು ನಿಜವೇ? | ಹೌದು.<br><br>ಪೊಲೀಸ್ ಇಲಾಖೆಯಿಂದ ಕೈಗೊಳ್ಳಲಾಗುವ ಸಬ್-ಇನ್ಸ್‌ಪೆಕ್ಟರ್ ಹಾಗೂ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ನಡೆಸಲಾಗುವ ಪರೀಕ್ಷೆಗಳನ್ನು ಅಭ್ಯರ್ಥಿಗಳ ಹಿತದೃಷ್ಟಿಯಿಂದ ಅವರು ಅರ್ಜಿಗಳಲ್ಲಿ ನಮೂದಿಸಿರುವ ಸ್ವಂತ ಜಿಲ್ಲಾ / ಆಯ್ಕೆ ಬಯಸಿರುವ ಜಿಲ್ಲಾ ಕೇಂದ್ರಗಳಲ್ಲಿ / ಸಮೀಪದ ಕೇಂದ್ರಗಳಲ್ಲಿ ಪರೀಕ್ಷೆಗಳನ್ನು ಬರೆಯಲು ಅವಕಾಶ ಮಾಡಿಕೊಡಲಾಗಿರುತ್ತದೆ.<br><br>ಕೆಲವು ಜಿಲ್ಲೆ / ನಗರದ ಖಾಲಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಹೆಚ್ಚಾದ ಸಂದರ್ಭದಲ್ಲಿ ಅಂತಹ ನಗರ / ಜಿಲ್ಲೆಗಳಲ್ಲಿ ಪರೀಕ್ಷಾ ಕೇಂದ್ರಗಳ ಕೊರತೆಯಿಂದಾಗಿ ಬೇರೆ ಜಿಲ್ಲೆ / ನಗರ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಬೇಕಾದ ಅನಿವಾರ್ಯತೆಯಿರುತ್ತದೆ. ಅಂತಹ ಸಂದರ್ಭದಲ್ಲಿ ಮಾತ್ರ ಆಡಳಿತಾತ್ಮಕ ಹಿತದೃಷ್ಟಿಯಿಂದ ಬೇರೆ ಪರೀಕ್ಷಾ ಕೇಂದ್ರದಲ್ಲಿ ಲಿಖಿತ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. |
| ಆ) | ರಾಜ್ಯದ ಲಕ್ಷಾಂತರ ಬಡ ಅಭ್ಯರ್ಥಿಗಳು ಓದು ಮತ್ತು ಕೆಲಸಕ್ಕಾಗಿ ಬೆಂಗಳೂರು, ಧಾರವಾಡದಂತಹ ದೂರದ ಊರಿಗೆ ವಲಸೆ ಬರುತ್ತಿದ್ದು ಇಂತಹ ಬಡ ಅಭ್ಯರ್ಥಿಗಳಿಗೆ ಪರೀಕ್ಷೆಯನ್ನು ಬರೆಯಲು ದೂರದ ಊರುಗಳಿಗೆ ಹೋಗಲು ಆರ್ಥಿಕ ಸಮಸ್ಯೆ ಮಾತ್ರವಲ್ಲದೆ ಸಮಯದ ಅಭಾವದಿಂದಾಗಿ ಪರೀಕ್ಷೆಗೆ ಹಾಜರಾಗದೆ ಅವಕಾಶ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | |
| ಇ) | 2018 ರಲ್ಲಿ ಡಿಎಆರ್, ಪಿಸಿ ಪರೀಕ್ಷೆಗೆ ಹಾಜರಾಗಲು ಹುಬ್ಬಳ್ಳಿ-ಧಾರವಾಡದಿಂದ ಬೆಂಗಳೂರಿನ ಪರೀಕ್ಷಾ ಕೇಂದ್ರಗಳಿಗೆ ಬರುತ್ತಿದ್ದ ವೇಳೆಯಲ್ಲಿ ರೈಲುಗಳ ವಿಳಂಬದಿಂದಾಗಿ ಸುಮಾರು 2000 ಅಭ್ಯರ್ಥಿಗಳಿಗೆ ಪರೀಕ್ಷೆಯನ್ನು ಬರೆಯಲು ಸಾಧ್ಯವಾಗಲಿಲ್ಲದಿದ್ದರೂ ಕೂಡ ಇಲಾಖೆಯು ಎಚ್ಚೆತ್ತುಕೊಳ್ಳದೆ ನಂತರದ ನೇಮಕಾತಿಗಳಲ್ಲಿ ಪರೀಕ್ಷಾ ಕೇಂದ್ರದ ಆಯ್ಕೆಗೆ ಇರುವ ಲೋಪದೋಷಗಳನ್ನು ಸರಿಪಡಿಸದೇ ಇರಲು ಕಾರಣವೇನು? (ವಿವರ ನೀಡುವುದು). | 2018 ರಲ್ಲಿ ನಡೆಸಲಾದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್/ಡಿಎಆರ್) ಹುದ್ದೆಗಳ ಲಿಖಿತ ಪರಿಕ್ಷೆಗೆ ಹುಬ್ಬಳ್ಳಿ-ಧಾರವಾಡದಿಂದ ಬೆಂಗಳೂರಿನ ಪರೀಕ್ಷಾ ಕೇಂದ್ರಗಳಿಗೆ ಬರುತ್ತಿದ್ದ ವೇಳೆಯಲ್ಲಿ ರೈಲುಗಳ ವಿಳಂಬದಿಂದಾಗಿ ಪರೀಕ್ಷೆ ಬರೆಯಲು ಸಾಧ್ಯವಾಗದ ಅಭ್ಯರ್ಥಿಗಳಿಂದ ಸೂಕ್ತ ದಾಖಲೆಗಳನ್ನು ಪಡೆದು ಅವರುಗಳಿಗೆ ಲಿಖಿತ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಹೀಗಾಗಿ ಯಾವುದೇ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಿಂದ ವಂಚಿತರಾಗಿರುವುದಿಲ್ಲ. |

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು

HD/13/PPS/2020-PS_B